**ಸಾಕ್ಷಿಯನ್ನು ದಿಃ 24.02.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

12 ಸಲಹಾ ಚೀಟಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 8 ಎಂದು,
34 ಔಷಧಿ ಪಾವತಿ ರಸೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 9 ಎಂದು,
ಸಿ.ಟಿ. ಸ್ಕ್ಯಾನ್ ವರದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ. 10 ಎಂದು,
ಎರಡು ಡಿಸ್ ಚಾರ್ಜ್ ಸಮ್ಮರಿಗಳನ್ನು ಹಾಜರು ಪಡಿಸಿದ್ದು ಒಟ್ಟಾಗಿ ನಿಪಿ. 11 ಎಂದು,
ಅರ್ಜಿದಾರರ ಆಧಾರ್ ಕಾರ್ಡ್ ಹಾಗೂ ಸಾಕ್ಷಿಯ ಆಧಾರ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಒಟ್ಟಾಗಿ ನಿಪಿ. 12 ಎಂದು ಗುರುತಿಸಲಾಯಿತು. ಆದುದರಿಂದ ನಾನು ಕೋರಿರುವಂತೆ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಪ್ರಾರ್ಥಿಸುತ್ತೇನೆ.

(ನಿಪಿ. 12 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

**ಪಾಟೀ ಸವಾಲುಃ**

ಎದುರುದಾರರು ಏಕಪಕ್ಷೀಯವಾಗಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.